ವಸತಿ ನಿಲಯದ ಕಟ್ಟಡವನ್ನು ಕಟ್ಟಲು ಕ್ರಮ ಕೈಗೊಳ್ಳುವುದು

283 (240) ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ (ಬೈಲಹೊಂಗಲ):- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಸವದತ್ತಿ ತಾಲ್ಲೂಕಿನ ಹಾರುಗೊಪ್ಪ ಗ್ರಾಮದಲ್ಲಿ ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆಯ ಮೆಟ್ರಿಕ್‌ಪೂರ್ವ ಬಾಲಕರ ವಸತಿನಿಲಯದ ಕಟ್ಟಡ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ವಸತಿನಿಲಯವನ್ನು ಕಟ್ಟಲು ಆ ಗ್ರಾಮದ ಜನರು ಉಚಿತವಾಗಿ ಸ್ಥಳವನ್ನು (ದಾನರೂಪವಾಗಿ) ಕೊಟ್ಟ ಸಂಗತಿ ನಿಜವೇ?

ಇ) ಹಾಗಿದ್ದಲ್ಲಿ, ಕೂಡಲೇ ಈ ಗ್ರಾಮದಲ್ಲಿ ಮೆಟ್ರಿಕ್‌ಪೂರ್ವ ಬಾಲಕರ ವಸತಿ ನಿಲಯವನ್ನು ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ; ಮತ್ತು ಎಷ್ಟು ದಿನಗಳಲ್ಲಿ ವಸತಿನಿಲಯವನ್ನು ಕಟ್ಟಿ ಮುಗಿಸಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಹೌದು

ಆ) ಹೌದು. ವಸತಿನಿಲಯದ ಕಟ್ಟಡ ಕಟ್ಟಲು ನಿವೇಶನ ಲಭ್ಯವಿರುತ್ತದೆ.

ಇ) ವಿದ್ಯಾರ್ಥಿನಿಲಯದ ಕಟ್ಟಡದ ನಿರ್ಮಾಣಕ್ಕಾಗಿ ಯೋಜನೆಯಲ್ಲಿ ಲಭ್ಯವಾಗುವ ಹಣದಲ್ಲಿ ಮುಂದುವರಿದ ಕಾಮಗಾರಿಗಳಿಗೆ ಆದ್ಯತೆ ನಿಡಲಾಗುವುದು ಹೊಸ ವಿದ್ಯಾರ್ಥಿನಿಲಯಗಳ ಕಟ್ಟಡಗಳ ನಿರ್ಮಾಣವನ್ನು ಹಂತ ಹಂತವಾಗಿ ಹಣದ ಲಭ್ಯತೆಗೆ ಅನುಗುಣವಾಗಿ ಕೈಗೆತ್ತಿಕೊಳ್ಳಲಾಗುವುದು.

ಹಾವೇರಿ ಜಿಲ್ಲೆಯ ನಗರ ಪ್ರದೇಶಗಳಿಗೆ ಕುಡಿಯುವ ನೀರು ಒದಗಿಸುವುದು

284 (491) ಶ್ರೀ ಕೋಳಿವಾಡ ಕೃಷ್ಣಪ್ಪ ಭೀಮಪ್ಪ (ರಾಣಿಬೆನ್ನೂರು) :- ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾವೇರಿ ಜಿಲ್ಲೆಯ ನಗರ ಪ್ರದೇಶಗಳಿಗೆ ಕುಡಿಯುವ ನೀರು ಒದಗಿಸಲು ಸರ್ಕಾರವು ಯಾವ ಯೋಜನೆ ಕೈ ಗೊಂಡಿದೆ?

ಆ) ಈ ಯೋಜನೆಗೆ ತಗಲುವ ವೆಚ್ಚ ಎಷ್ಟು?

ಇ) ಈ ಯೋಜನೆಯು ಯಾವ ಹಂತದಲ್ಲಿದೆ.

ಈ) ರಾಣಿಬೆನ್ನೂರು ಹಾಗೂ ಬ್ಯಾಡಗಿ ನಗರಗಳಿಗೆ ಕುಡಿಯುವ ನೀರು ಒದಗಿಸುವ ಮುದೇನೂರು ಕುಡಿಯುವ ನೀರು ಯೋಜನೆಗೆ ಮಂಜೂರು ಆದ ವೆಚ್ಚ ಎಷ್ಟು?

ಉ) ಈ ಯೋಜನೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು.

ಊ) ಈ ಯೋಜನೆಯನ್ನು ಪೂರ್ಣಗೊಳಿಸಲು ತಗಲುವ ವೆಚ್ಚವೆಷ್ಟು?